# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಸಹಕರಿಸಲು ನೇಮಿಸಿಕೊಂಡಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಮಾರ್ಚ್ 2013ರ ಸಂಭಾವನೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 171 ನಾಸೇಖಾ 2012, ದಿನಾಂಕ: 25/9/2012.
4. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಶಿವಮೊಗ್ಗ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ದಿನಾಂಕ: 19.04.2013, 24.04.2013, 25.04.2013ರ ಪತ್ರಗಳು.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಆದೇಶದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಸಹಕರಿಸಲು ಜಿಲ್ಲಾಧಿಕಾರಿಗಳು ನೇಮಿಸಿಕೊಂಡಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಮಾರ್ಚ್ 2013ರ ವರೆಗೆ ಸಂಭಾವನೆಯನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4) ರ ಪತ್ರಗಳಲ್ಲಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಮಾರ್ಚ್ 2013ರ ಮಾಹೆಯ ವೇತನದ ಬಾಬ್ತು ಡಿ.ಸಿ.ಬಿಲ್ಲು ತಯಾರಿಸಿ, ರಾಜ್ಯ ಹುಜೂರ್ ಖಜಾನೆಗೆ ಸಲ್ಲಿಸಲಾಗಿ ಅನುದಾನವು ವಾಪಸ್ ಆಗಿರುವುದರಿಂದ ಸದರಿ ಬಿಲ್ಲನ್ನು ಅನುದಾನ ಲಭ್ಯವಿಲ್ಲವೆಂದು ಹಿಂದಿರುಗಿಸಲಾಗಿದೆ. ಆದ್ದರಿಂದ ಮಾರ್ಚ್ 2013ರ ಮಾಹೆಯ ವೇತನ ಬಾಬ್ತು ರೂ.15,000/-ಗಳ ಅನುದಾನವನ್ನು ಬಿಡುಗಡೆ ಮಾಡಲು 6 ಜಿಲ್ಲೆಗಳ ಜಿಲ್ಲಾಧಿಕಾರಿಯವರು ಕೋರಿರುತ್ತಾರೆ. ಅದರಂತೆ 6 ಜಿಲ್ಲೆಗಳಿಗೂ ಒಟ್ಟಾರೆ ರೂ.90,000/-ಗಳ ಅನುದಾನವನ್ನು ಬಿಡುಗಡೆ ಮಾಡಬೇಕಾಗುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 171 ನಾಸೇಖಾ 2012, ಬೆಂಗಳೂರು, ದಿನಾಂಕ : 29/04/2013

ಮೇಲೆ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ

--2

ಜಿಲ್ಲಾಧಿಕಾರಿಗಳಿಗೆ ಸಹಕರಿಸಲು ನೇಮಿಸಲಾಗಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಮಾರ್ಚ್ -2013ರ ಸಂಭಾವನೆಗಾಗಿ ಈ ಕೆಳಗೆ ನಮೂದಿಸಿರುವ ಜಿಲ್ಲೆಗಳ ಜಿಲ್ಲಾಧಿಕಾರಿಯವರಿಗೆ "ಸಕಾಲ ಮಂಡಳಿ" ಯಿಂದ ಬಿಡುಗಡೆ ಮಾಡಲಾಗಿದೆ

| ಕ್ರ.ಸಂ | ಜಿಲ್ಲೆಯ ಹೆಸರು | ಪ್ರಸ್ತಾವನೆಯ ದಿನಾಂಕ | ಕೋರಿಕೆಯ ಮೊತ್ತ (ಮಾರ್ಚ್ 2013ರ ವೇತನ) | ಬಿಡುಗಡೆ ಮಾಡಬೇಕಾದ ಮೊತ್ತ |
|---|---|---|---|---|
| 1. | ಶಿವಮೊಗ್ಗ | 24.04.2013 | ರೂ. 15,000/- | ರೂ. 15,000/- |
| 2. | ಬೆಂಗಳೂರು ನಗರ | 24.04.2013 | ರೂ. 15,000/- | ರೂ. 15,000/- |
| 3. | ಬೆಂಗಳೂರು ಗ್ರಾಮಾಂತರ | 25.04.2013 | ರೂ. 15,000/- | ರೂ. 15,000/- |
| 4. | ರಾಮನಗರ | 25.04.2013 | ರೂ. 15,000/- | ರೂ. 15,000/- |
| 5. | ತುಮಕೂರು | 19.04.2013 | ರೂ. 15,000/- | ರೂ. 15,000/- |
| 6. | ಚಿಕ್ಕಬಳ್ಳಾಪುರ | 25.04.2013 | ರೂ. 15,000/- | ರೂ. 15,000/- |
| | ಒಟ್ಟು | | ರೂ.90,000/- | ರೂ.90,000/- |
| | ಒಟ್ಟು (ತೊಂಭತ್ತು ಸಾವಿರ ರೂಪಾಯಿಗಳು ಮಾತ್ರ) | | | |

ಮೇಲಿನ ವೆಚ್ಚವನ್ನು 2013-14ನೇ ಸಾಲಿನ ಲೆಕ್ಕಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ನಿಗಧಿಪಡಿಸಿದ ರೂ.15.00 ಕೋಟಿಗಳ ವೆಚ್ಚದಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸದರಿ ಆದೇಶವನ್ನು ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ವಿ. ಗಾಯತ್ರಿ) 29/4
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ, ತುಮಕೂರು ಜಿಲ್ಲೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು), ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.